# ಪೌಲನು ಎಫೆಸಿಯರಿಗೆ ಬರೆದ ಪತ್ರ

## ಮುನ್ನುಡಿ

"ಕಾಲವು ಸಂಪೂರ್ಣಗೊಂಡಾಗ ಇಹಪರಗಳಲ್ಲಿರುವ ಸಮಸ್ತವನ್ನು ಕ್ರಿಸ್ತಯೇಸುವಿನಲ್ಲಿ ಒಂದು ಕೂಡಿಸುವುದೇ ದೇವರ ಸಂಕಲ್ಪ." ಇದೇ ಪೌಲನು ಎಫೆಸಿಯರಿಗೆ ಬರೆದ ಪತ್ರದ ತಿರುಳು. ಈ ವಿಷಯವನ್ನು ವಿಷದವಾಗಿಯೂ ಸವಿಸ್ತಾರವಾಗಿಯೂ ವಿವರಿಸಿದ ನಂತರ, ದೇವಜನರು ಪ್ರಭು ಯೇಸುವಿನ ಅನ್ಯೋನ್ಯತೆಯಲ್ಲಿದ್ದರೆ ಮಾತ್ರ ಅವರು ದೇವರ ಸಂಕಲ್ಪಕ್ಕನುಗುಣವಾಗಿ ಬಾಳಿ, ಮಾನವಕೋಟಿಯನ್ನು ವಿಶ್ವಾಸದಲ್ಲಿ ಐಕ್ಯಗೊಳಿಸಲು ಸಾಧ್ಯ ಎಂದು ಲೇಖಕನು ನಿರೂಪಿಸಿದ್ದಾನೆ.

ಪತ್ರದ ಮೊದಲನೆಯ ಭಾಗದಲ್ಲಿ, ಮಾನವಕೋಟಿಯ ಐಕಮತ್ಯವನ್ನು ಸಾಧಿಸಲು ದೇವರು ಹೇಗೆ ನಿಯೋಜಿಸಿದ್ದಾರೆಂದು ವಿವರಿಸಲಾಗಿದೆ. ದೇವರು ಕೆಲವರನ್ನು ತಮ್ಮ ಜನರನ್ನಾಗಿ ಆಯ್ಕೆಮಾಡಿಕೊಳ್ಳುತ್ತಾರೆ; ಜನರು ವಿಶ್ವಾಸಭ್ರಷ್ಟರಾದಾಗ ಅವರನ್ನು ಕ್ಷಮಿಸಿ, ಕ್ರಿಸ್ತಯೇಸುವಿನ ಮುಖಾಂತರ ಉದ್ಧರಿಸುತ್ತಾರೆ; ಪವಿತ್ರಾತ್ಮರನ್ನು ಪ್ರದಾನಮಾಡಿ, ತಮ್ಮ ಯೋಜನೆಯನ್ನು ಈಡೇರಿಸುವುದಾಗಿ ವಾಗ್ದಾನಮಾಡುತ್ತಾರೆ.

ಎರಡನೆಯ ಭಾಗದಲ್ಲಿ, ಓದುಗರು ಇತರರೊಂದಿಗೆ ಅನ್ಯೋನ್ಯವಾಗಿ ಬಾಳಿ, ಕ್ರಿಸ್ತಯೇಸುವಿನೊಂದಿಗೆ ತಮಗಿರುವ ನಿಕಟ ಬಾಂಧವ್ಯವನ್ನು ವ್ಯಕ್ತಪಡಿಸಬೇಕೆಂದು ಕರೆಕೊಡಲಾಗಿದೆ.

ದೇವಜನರಿಗೆ ತಮ್ಮತಮ್ಮೊಳಗೂ ಕ್ರಿಸ್ತಯೇಸುವಿನೊಂದಿಗೂ ಇರುವ ಅನ್ಯೋನ್ಯತೆಯನ್ನು ಲೇಖಕನು ವಿವಿಧ ಅಲಂಕಾರಗಳಿಂದ ಬಣ್ಣಿಸುತ್ತಾನೆ: ಸರ್ವಸದಸ್ಯರಿಂದ ಕೂಡಿದ ಧರ್ಮಸಭೆ ಒಂದು ಶರೀರ, ಕ್ರಿಸ್ತ ಯೇಸುವೇ ಅದರ ಶಿರಸ್ಸು; ಧರ್ಮಸಭೆ ಒಂದು ಕಟ್ಟಡ, ಕ್ರಿಸ್ತಯೇಸುವೇ ಅದರ ಮೂಲೆಗಲ್ಲು; ಧರ್ಮಸಭೆ ಒಬ್ಬ ಧರ್ಮಪತ್ನಿ, ಕ್ರಿಸ್ತಯೇಸುವೇ ಆಕೆಯ ಪತಿ. ಕ್ರಿಸ್ತಯೇಸುವಿನಲ್ಲಿ ತೋರಿಬರುವ ಸಮೃದ್ಧವಾದ ದೈವಾನುಗ್ರಹ ಲೇಖಕನನ್ನು ಗಹನವಾದ ಆಲೋಚನೆಗಳಲ್ಲಿ ತಲ್ಲೀನನಾಗುವಂತೆ ಮಾಡುತ್ತದೆ. ಕ್ರಿಸ್ತರ ಪ್ರೀತಿ, ಕೃಪೆ, ತ್ಯಾಗ, ಪಾಪಕ್ಷಮೆ, ಪರಿಶುದ್ಧತೆ ಇವುಗಳ ಹಿನ್ನೆಲೆಯಲ್ಲಿ ಲೇಖಕನು ಪ್ರತಿಯೊಂದನ್ನೂ ಅವಲೋಕಿಸುತ್ತಾನೆ.

### ಪರಿವಿಡಿ

| | | |
|---|---|---|
| ಪೀಠಿಕೆ | – | 1.1 – 1.2 |
| ಕ್ರಿಸ್ತಯೇಸು ಮತ್ತು ಧರ್ಮಸಭೆ | – | 1.3 – 3.21 |
| ಕ್ರಿಸ್ತಯೇಸುವಿನಲ್ಲಿ ಹೊಸಜೀವನ | – | 4.1 – 6.20 |
| ಸಮಾಪ್ತಿ | – | 6.21 – 6.24 |

### ಪೀಠಿಕೆ

**1** ಕ್ರಿಸ್ತಯೇಸುವಿನಲ್ಲಿ ವಿಶ್ವಾಸವಿಟ್ಟಿರುವ ಎಫೆಸದ ದೇವಜನರಿಗೆ – ದೇವರ ಚಿತ್ತಾನುಸಾರ ಕ್ರಿಸ್ತ ಯೇಸುವಿನ ಪ್ರೇಷಿತನಾಗಿ ನೇಮಕಗೊಂಡ ಪೌಲನು ಬರೆಯುವ ಪತ್ರ.

2 ಪಿತನಾದ ದೇವರ ಮತ್ತು ಪ್ರಭುವಾದ ಯೇಸುಕ್ರಿಸ್ತರ ಅನುಗ್ರಹವೂ ಶಾಂತಿ ಸಮಾಧಾನವೂ ನಿಮಗೆ ಲಭಿಸಲಿ!

### ದೇವರ ಕೃಪಾವರ

3 ನಮ್ಮ ಪ್ರಭು ಯೇಸುಕ್ರಿಸ್ತರ ಪಿತನಾದ ದೇವರಿಗೆ ಸ್ತುತಿ ಸಲ್ಲಲಿ! ಪಿತದೇವರು ಸ್ವರ್ಗಲೋಕದಿಂದ ಎಲ್ಲಾ ಬಗೆಯ ಆಧ್ಯಾತ್ಮಿಕ ಆಶೀರ್ವಾದಗಳನ್ನು ಕ್ರಿಸ್ತಯೇಸುವಿನಲ್ಲಿ ನಮಗೆ ಅನುಗ್ರಹಿಸಿದ್ದಾರೆ. 4ಜಗತ್ತು

ಸೃಷ್ಟಿಯಾಗುವ ಮೊದಲೇ ದೇವರು ಕ್ರಿಸ್ತಯೇಸುವಿನಲ್ಲಿ ನಮ್ಮನ್ನು ತಮ್ಮವರನ್ನಾಗಿ ಆರಿಸಿಕೊಂಡರು. ಹೀಗೆ ಅವರ ಸನ್ನಿಧಿಯಲ್ಲಿ ನಾವು ನಿಷ್ಕಳಂಕರೂ ನಿರ್ದೋಷಿಗಳೂ ಆಗಿರಬೇಕೆಂದು ಇಚ್ಛಿಸಿದರು. [5]ನಮ್ಮ ಮೇಲಿನ ಪ್ರೀತಿಯಿಂದಾಗಿ ದೇವರು ಯೇಸುಕ್ರಿಸ್ತರ ಮೂಲಕ ನಮ್ಮನ್ನು ತಮ್ಮ ಮಕ್ಕಳನ್ನಾಗಿಸಿಕೊಳ್ಳಲು ಆಗಲೇ ನಿರ್ಧರಿಸಿದ್ದರು. ಇದು ಅವರ ಸಂಕಲ್ಪ ಹಾಗೂ ಚಿತ್ತವಾಗಿತ್ತು. [6]ತಮ್ಮ ಪ್ರೀತಿಯ ಪುತ್ರನಲ್ಲೇ ಅವರು ನಮಗೆ ಉಚಿತವಾಗಿ ಅನುಗ್ರಹಿಸಿರುವ ಅತಿಶಯ ವರಪ್ರಸಾದಕ್ಕಾಗಿ ಅವರಿಗೆ ಸ್ತುತಿಸಲ್ಲಿಸೋಣ. [7–8]ಯೇಸುಕ್ರಿಸ್ತರು ಸುರಿಸಿದ ರಕ್ತಧಾರೆಯ ಮೂಲಕ ನಮಗೆ ಪಾಪಕ್ಷಮೆ ದೊರಕಿತು; ವಿಮೋಚನೆಯೂ ಲಭಿಸಿತು. ಇದು ದೇವರ ಅನುಗ್ರಹದ ಶ್ರೀಮಂತಿಕೆಯೇ ಸರಿ. ಇದನ್ನು ನಮ್ಮ ಮೇಲೆ ಅವರು ಯಥೇಚ್ಛವಾಗಿ ಸುರಿಸಿದ್ದಾರೆ. [9]ದೇವರು ಸಮಗ್ರ ಜ್ಞಾನ–ವಿವೇಕಗಳಿಂದ ತಮ್ಮ ರಹಸ್ಯ ಯೋಜನೆಯನ್ನು ನಮಗೆ ತಿಳಿಯಪಡಿಸಿದ್ದಾರೆ. ಮೊದಲೇ ನಿರ್ಧರಿಸಿದ್ದಂತೆ ಅದನ್ನು ಯೇಸುಕ್ರಿಸ್ತರ ಮೂಲಕ ಪರಿಪೂರ್ಣಗೊಳಿಸಬೇಕೆಂಬುದು ಅವರ ಸಂಕಲ್ಪವಾಗಿತ್ತು. [10]ಕಾಲವು ಸಂಪೂರ್ಣಗೊಂಡಾಗ ಇಹಪರಗಳಲ್ಲಿರುವ ಸಮಸ್ತವನ್ನು ಕ್ರಿಸ್ತ ಯೇಸುವಿನಲ್ಲಿ ಒಂದುಗೂಡಿಸುವುದೇ ಈ ಯೋಜನೆಯ ಇಂಗಿತ:

11 ದೈವಯೋಜನೆಯಂತೆಯೇ ಸಕಲವೂ ಸಂಭವಿಸುತ್ತದೆ. ದೇವರು ಆದಿಯಲ್ಲೇ ಸಂಕಲ್ಪಸಿದ್ದಂತೆ ತಮ್ಮ ಚಿತ್ತಕ್ಕನುಗುಣವಾಗಿ ಕ್ರಿಸ್ತಯೇಸುವಿನ ಅನ್ಯೋನ್ಯತೆಯಲ್ಲಿ ನಮ್ಮನ್ನು ತಮ್ಮವರನ್ನಾಗಿ ಆರಿಸಿಕೊಂಡರು. [12]ಆದಕಾರಣ ಯೇಸುಕ್ರಿಸ್ತರಲ್ಲಿ ಮೊತ್ತಮೊದಲು ನಿರೀಕ್ಷೆಯನ್ನಿರಿಸಿದ ನಾವು ದೇವರ ಮಹಿಮೆಯನ್ನು ಸ್ತುತಿಸಿ ಹಾಡಬೇಕು.

13 ನೀವು ಸಹ ಸತ್ಯವಾಕ್ಯವನ್ನು ಅಂದರೆ, ನಿಮಗೆ ಜೀವೋದ್ಧಾರವನ್ನೀಯುವ ಶುಭಸಂದೇಶವನ್ನು ಕೇಳಿ ಯೇಸುಕ್ರಿಸ್ತರಲ್ಲಿ ವಿಶ್ವಾಸ ಇಟ್ಟಿರಿ. ದೇವರು ವಾಗ್ದಾನಮಾಡಿದ ಪವಿತ್ರಾತ್ಮ ಅವರಿಂದ ಮುದ್ರಿತರಾದಿರಿ. [14]ಹೀಗೆ ದೇವರಿಗೆ ಸೇರಿದವರು ವಿಮೋಚನೆ ಹೊಂದಿ ಸ್ವರ್ಗೀಯ ಸ್ವಾಸ್ಥ್ಯಕ್ಕೆ ಬಾಧ್ಯರಾಗಲು ಆ ಪವಿತ್ರಾತ್ಮರೇ ಆಧಾರ. ಈ ಕಾರಣ ದೇವರಿಗೆ ಮಹಿಮೆ ಸಲ್ಲಲಿ.

## ಭರವಸೆಯ ಭಾಗ್ಯ

15–[16]ಪ್ರಭು ಯೇಸುವಿನಲ್ಲಿ ನೀವಿಟ್ಟಿರುವ ವಿಶ್ವಾಸ ಹಾಗೂ ದೇವಜನರೆಲ್ಲರ ಮೇಲೆ ನಿಮಗಿರುವ ಪ್ರೀತಿಯನ್ನು ಕುರಿತು ಕೇಳಿದ್ದೇನೆ. ಅಂದಿನಿಂತ ನಿಮ್ಮ ಸಲುವಾಗಿ ದೇವರಿಗೆ ಸದಾ ಕೃತಜ್ಞತಾಸ್ತುತಿ ಸಲ್ಲಿಸಿ, ನನ್ನ ಪ್ರಾರ್ಥನೆಯಲ್ಲಿ ನಿಮ್ಮನ್ನು ಸ್ಮರಿಸಿಕೊಳ್ಳುತ್ತಿದ್ದೇನೆ. [17]ನಮ್ಮ ಪ್ರಭು ಯೇಸುಕ್ರಿಸ್ತರ ದೇವರೂ ಮಹಿಮಾನ್ವಿತ ತಂದೆಯೂ ಆದವರು, ನಿಮಗೆ ಜ್ಞಾನವನ್ನೂ ವಿವೇಚನೆಯನ್ನೂ ನೀಡುವ ಆತ್ಮವನ್ನು ದಯಪಾಲಿಸಲಿ; ತಮ್ಮನ್ನು ಸಂಪೂರ್ಣವಾಗಿ ಅರಿತುಕೊಳ್ಳುವ ವರವನ್ನು ಈಯಲಿ, ಎಂದು ಪ್ರಾರ್ಥಿಸುತ್ತೇನೆ. [18]ದೇವರು ನಿಮ್ಮ ಮನೋನೇತ್ರಗಳನ್ನು ತೆರೆಯಲಿ; ಅವರ ಬೆಳಕು ನಿಮಗೆ ಕಾಣುವಂತೆ ಆಗಲಿ. ಹೀಗೆ, ಅವರು ಕರೆದಿರುವ ಜನರಿಗೆ ಲಭಿಸುವ ಭರವಸೆಯ ಭಾಗ್ಯ ಎಂಥದ್ದೆಂದೂ ದೇವಜನರಿಗೆ ಕಾಯ್ದಿರಿಸಿರುವ ಸ್ವಾಸ್ಥ್ಯ ಸಂಪತ್ತು ಎಂಥದ್ದೆಂದೂ ನೀವು ಅರಿತುಕೊಳ್ಳಬೇಕು. [19]ಕ್ರೈಸ್ತವಿಶ್ವಾಸಿಗಳಾದ ನಮ್ಮಲ್ಲಿ ದೇವರು ಸಾಧಿಸಿರುವ ಮಹತ್ಕಾರ್ಯಗಳು ಎಷ್ಟು ಶಕ್ತಿಯುತವಾದುವು ಎಂಬುದು ನಿಮಗೆ ಮನದಟ್ಟಾಗಬೇಕು. [20–21]ಈ ಮಹಿಮಾಶಕ್ತಿಯಿಂದಲೇ ದೇವರು ಯೇಸುಕ್ರಿಸ್ತರನ್ನು ಮರಣದಿಂದ ಎಬ್ಬಿಸಿದರು; ಸಕಲ ಅಧಿಕಾರ, ಆಧಿಪತ್ಯ, ಪ್ರಭಾವ ಮತ್ತು ಪ್ರಭುತ್ವ ಇವೆಲ್ಲವುಗಳ ಮೇಲೆ ಯೇಸುಕ್ರಿಸ್ತರೇ ಆಡಳಿತ ನಡೆಸುವಂತೆ ಸ್ವರ್ಗಲೋಕದಲ್ಲಿ ಅವರನ್ನು ತಮ್ಮ ಬಲಗಡೆಯಲ್ಲಿ ಆಸೀನರಾಗಿಸಿದ್ದಾರೆ. ಹೀಗೆ ಇಹದಲ್ಲೂ ಪರದಲ್ಲೂ ಕೀರ್ತಿಗಳಿಸಿದವರೆಲ್ಲರಿಗಿಂತಲೂ ಯೇಸುಕ್ರಿಸ್ತರ ಮಹಿಮೆಯೇ ಸರ್ವಶ್ರೇಷ್ಠವಾದುದು. [22]ದೇವರು ಸಮಸ್ತವನ್ನು ಯೇಸುಕ್ರಿಸ್ತರ ಪಾದದಡಿಯಲ್ಲಿರಿಸಿ, ಅವರನ್ನು ಧರ್ಮಸಭೆಯ ಶಿರಸ್ಸನ್ನಾಗಿ ನೇಮಿಸಿದ್ದಾರೆ. [23]ಧರ್ಮಸಭೆಯೇ ಯೇಸುಕ್ರಿಸ್ತರ ದೇಹ. ಎಲ್ಲವನ್ನೂ ಎಲ್ಲಾ ವಿಧದಲ್ಲೂ ಪೂರೈಸುವಾತನಿಂದ ಅದು ಪರಿಪೂರ್ಣ ಉಳ್ಳದ್ದಾಗಿದೆ.

## ಮೃತ್ಯುವಿನಿಂದ ಅಮೃತಕ್ಕೆ

**2** ನಿಮ್ಮ ಅಪರಾಧಗಳ ಹಾಗೂ ಪಾಪಗಳ ದೆಸೆಯಿಂದ ಹಿಂದೊಮ್ಮೆ ನೀವು ಆಧ್ಯಾತ್ಮಿಕವಾಗಿ ಮೃತರಾಗಿದ್ದಿರಿ.
2ಆಗ ನೀವು ಲೋಕದ ರೀತಿನೀತಿಗಳನ್ನು ಅನುಸರಿಸಿ ಬಾಳಿದಿರಿ. ವಾಯುಮಂಡಲದಲ್ಲಿನ ಅಶರೀರ ಶಕ್ತಿಗಳ
ಅಧಿಪತಿಗೆ ಅಧೀನರಾಗಿದ್ದಿರಿ. ದುಷ್ಕರ್ಮಿಗಳನ್ನು ಪ್ರಚೋದಿಸುತ್ತಲಿರುವ ದುರಾತ್ಮನಿಗೆ ವಿಧೇಯರಾಗಿದ್ದಿರಿ.
3ವಾಸ್ತವವಾಗಿ ಹಿಂದೊಮ್ಮೆ ನಾವೆಲ್ಲರು ಸಹ ಹಾಗೆಯೇ ಇದ್ದೆವು. ಶಾರೀರಿಕ ಆಶೆಆಮಿಷಗಳಿಗೆ ತುತ್ತಾಗಿದ್ದೆವು;
ಮಾನಸಿಕ ಹಾಗೂ ಶಾರೀರಿಕ ದುರಿಚ್ಛೆಗಳನ್ನೇ ಈಡೇರಿಸುತ್ತಾ ಬಂದೆವು. ಸ್ವಭಾವತಃ ನಾವು ಸಹ
ಇತರರಂತೆಯೇ ದೈವಕೋಪಕ್ಕೆ ಗುರಿಯಾಗಿದ್ದೆವು.

4 ಆದರೆ ಕರುಣಾಮಯ ದೇವರು ನಮ್ಮನ್ನು ಅಪಾರವಾಗಿ ಪ್ರೀತಿಸಿ, 5ನಮ್ಮ ಅಪರಾಧಗಳ ನಿಮಿತ್ತ
ಆಧ್ಯಾತ್ಮಿಕವಾಗಿ ಮೃತರಾಗಿದ್ದ ನಮ್ಮನ್ನು ಕ್ರಿಸ್ತಯೇಸುವಿನೊಡನೆ ಜೀವಂತರನ್ನಾಗಿ ಮಾಡಿದರು
(ದೈವಾನುಗ್ರಹದಿಂದಲೇ ನೀವೀಗ ಜೀವೋದ್ಧಾರ ಹೊಂದಿದ್ದೀರಿ). 6ಯೇಸುಕ್ರಿಸ್ತರೊಡನೆ ನಮ್ಮನ್ನೂ ಎಬ್ಬಿಸಿ,
ಸ್ವರ್ಗಲೋಕದಲ್ಲಿ ಅವರ ಸನ್ನಿಧಿಯಲ್ಲಿಯೇ ಮಂಡಿಸುವ ಅವಕಾಶ ಮಾಡಿಕೊಟ್ಟರು. 7ದೇವರು
ಯೇಸುಕ್ರಿಸ್ತರಲ್ಲಿ ನಮಗೆ ತೋರಿದ ದಯೆಯ ಮೂಲಕ ತಮ್ಮ ಅನುಗ್ರಹದ ಶ್ರೀಮಂತಿಕೆಯನ್ನು ಮುಂದಣ
ಯುಗಗಳಲ್ಲಿ ತಿಳಿಯಪಡಿಸುವುದೇ ಅವರ ಉದ್ದೇಶವಾಗಿತ್ತು. 8ದೈವಾನುಗ್ರಹದಿಂದಲೇ ನೀವು ವಿಶ್ವಾಸದ
ಮೂಲಕ ಜೀವೋದ್ಧಾರ ಹೊಂದಿದ್ದೀರಿ. ಇದು ನಿಮ್ಮ ಪ್ರಯತ್ನದ ಫಲವಲ್ಲ; ದೇವರಿತ್ತ ವರಪ್ರಸಾದ. 9ಇದು
ಮಾನವರ ಪುಣ್ಯಕಾರ್ಯಗಳ ಪರಿಣಾಮವೂ ಅಲ್ಲ. ಆದುದರಿಂದ ಯಾರೂ ಹೆಮ್ಮೆಪಡಲು ಆಸ್ಪದವಿಲ್ಲ.
10ನಾವಾದರೋ ದೇವರ ಕಲಾಕೃತಿಗಳು. ಕ್ರಿಸ್ತಯೇಸುವಿನಲ್ಲಿ ನಾವು ಸತ್ಕಾರ್ಯಗಳನ್ನು ಮಾಡುತ್ತಾ
ಬಾಳಬೇಕೆಂದು ತಾವು ಮೊದಲೇ ನಿರ್ಣಯಿಸಿದ್ದಂತೆ ದೇವರು ನಮ್ಮನ್ನು ಸೃಷ್ಟಿಸಿದ್ದಾರೆ.

## ಒಂದೇ ಜನಾಂಗ

11 ಹಿಂದೊಮ್ಮೆ ನೀವು ಅನ್ಯಜನರಾಗಿದ್ದಿರಿ ಎಂಬುದು ನಿಮ್ಮ ನೆನಪಿನಲ್ಲಿರಲಿ; ಆಗ ಶಾರೀರಿಕ ಸುನ್ನತಿ
ಪಡೆದವರು ನಿಮ್ಮನ್ನು 'ಸುನ್ನತಿಯಿಲ್ಲದವರು' ಎಂದು ತುಚ್ಛೀಕರಿಸಿ ಕರೆಯುತ್ತಿದ್ದರು. 12ಆಗ ನೀವು
ಯೇಸುಕ್ರಿಸ್ತರಿಂದ ದೂರವಿದ್ದಿರಿ; ದೇವರು ಆಯ್ದುಕೊಂಡ ಜನಾಂಗಕ್ಕೆ ಸೇರದೆ ಪರಕೀಯರಾಗಿದ್ದಿರಿ;
ದೇವರು ತಮ್ಮ ಜನರೊಂದಿಗೆ ಮಾಡಿಕೊಂಡ ಒಡಂಬಡಿಕೆಯಲ್ಲಿ ಪಾಲಿಲ್ಲದವರಾಗಿದ್ದಿರಿ; ನಂಬಿಕೆ ನಿರೀಕ್ಷೆ
ಇಲ್ಲದೆ ಬಾಳಿದಿರಿ ಮತ್ತು ದೇವರಿಲ್ಲದವರಂತೆ ಲೋಕದಲ್ಲಿ ಬದುಕಿದಿರಿ. 13ಹೀಗೆ ಹಿಂದೊಮ್ಮೆ ದೇವರಿಂದ
ದೂರವಾಗಿದ್ದ ನಿಮ್ಮನ್ನು ಕ್ರಿಸ್ತಯೇಸು ಸುರಿಸಿದ ರಕ್ತದ ಮೂಲಕ ದೇವರ ಹತ್ತಿರಕ್ಕೆ ತರಲಾಯಿತು.
14ಯೇಸುಕ್ರಿಸ್ತರೇ ನಮ್ಮ ಶಾಂತಿದಾತ. ನಿಮ್ಮನ್ನೂ ನಮ್ಮನ್ನೂ ಒಂದುಗೂಡಿಸಿದವರು ಅವರೇ. ನಮ್ಮೀರ್ವರನ್ನು
ಪ್ರತ್ಯೇಕಿಸಿದ್ದ ಹಗೆತನವೆಂಬ ಅಡ್ಡಗೋಡೆಯನ್ನು ತಮ್ಮ ಶರೀರದಿಂದಲೇ ಕೆಡವಿಹಾಕಿದ್ದಾರೆ.
15ವಿಧಿನಿಯಮಗಳಿಂದ ಕೂಡಿದ ಧರ್ಮಶಾಸ್ತ್ರವನ್ನು ನಿರರ್ಥಕಗೊಳಿಸಿದ್ದಾರೆ. ಉಭಯರನ್ನು ಒಂದುಗೂಡಿಸಿ,
ಶಾಂತಿ ಸಮಾಧಾನವನ್ನೇರ್ಪಡಿಸಿ, ನೂತನ ಮಾನವನನ್ನಾಗಿ ಪರಿವರ್ತಿಸಿದ್ದಾರೆ. 16ತಮ್ಮ ಶಿಲುಬೆಯ
ಮರಣದ ಮೂಲಕ ಹಗೆತನವನ್ನು ನಿರ್ಮೂಲಗೊಳಿಸಿ ಉಭಯತ್ರರನ್ನು ಒಂದೇ ದೇಹದಂತೆ ಮಾಡಿ
ದೇವರೊಂದಿಗೆ ಸಂಧಾನಗೊಳಿಸಿದ್ದಾರೆ. 17ಯೇಸುಕ್ರಿಸ್ತರು ಬಂದು ದೇವರಿಂದ ದೂರವಾಗಿದ್ದ ನಿಮಗೂ
ಹತ್ತಿರವಾಗಿದ್ದ ನಮಗೂ ಶಾಂತಿಯ ಸಂದೇಶವನ್ನು ಸಾರಿದರು. 18ಇದರ ಪರಿಣಾಮವಾಗಿ ಅವರ
ಮುಖಾಂತರವೇ ಉಭಯತ್ರರು ಒಂದೇ ಪವಿತ್ರಾತ್ಮ ಅವರಲ್ಲಿ ಪಿತನ ಸಾನ್ನಿಧ್ಯವನ್ನು ಸೇರಲು
ಮಾರ್ಗವಾಯಿತು. 19ಹೀಗಿರಲಾಗಿ, ನೀವು ಇನ್ನು ಮೇಲೆ ಪರಕೀಯರೂ ಪರದೇಶಿಗಳೂ ಆಗಿರದೆ,
ದೇವಜನರೊಂದಿಗೆ ಸಹಜೀವಿಗಳು ಮತ್ತು ದೇವರ ಮನೆತನದವರು ಆಗಿದ್ದೀರಿ. 20ಪ್ರೇಷಿತರು ಹಾಗೂ
ಪ್ರವಾದಿಗಳೂ ಹಾಕಿದ ತಳಹದಿಯ ಮೇಲೆ ನಿಮ್ಮನ್ನು ನಿರ್ಮಿಸಲಾಗಿದೆ. ಯೇಸುಕ್ರಿಸ್ತರೇ ಈ ತಳಹದಿಯ
ಮುಖ್ಯ ಮೂಲೆಗಲ್ಲು. 21ಇಡೀ ಕಟ್ಟಡವು ಅವರನ್ನೇ ಆಧರಿಸಿ, ಎಲ್ಲಾ ಭಾಗಗಳು ಒಂದಕ್ಕೊಂದು
ಹೊಂದಿಕೆಯಾಗಿ ನಿಂತು, ಪ್ರಭುವಿಗೆ ಅರ್ಪಿತವಾದ ದೇವಮಂದಿರ ಆಗುತ್ತದೆ. 22ಯೇಸುಕ್ರಿಸ್ತರ

ಅನ್ಯೋನ್ಯತೆಯಲ್ಲಿ ನೀವು ಸಹ ಇತರರೆಲ್ಲರೊಡನೆ ದೇವರ ನಿವಾಸಕ್ಕೆ ತಕ್ಕ ಮಂದಿರವಾಗಿ ಪವಿತ್ರಾತ್ಮ ಅವರಿಂದ ಕಟ್ಟಲ್ಪಡುತ್ತಿದ್ದೀರಿ.

## ಆಧ್ಯಾತ್ಮಿಕ ಸಿರಿಸಂಪತ್ತು

**3** ಅನ್ಯಜನರಾದ ನಿಮ್ಮ ನಿಮಿತ್ತ ಯೇಸುಕ್ರಿಸ್ತರ ಸೆರೆಯಾಳಾಗಿರುವ ಪೌಲನೆಂಬ ನಾನು
ಹೇಳುವುದೇನೆಂದರೆ: 2ದೇವರು ತಮ್ಮ ಕೃಪಾತಿಶಯದ ಬಗ್ಗೆ ಸಾರುವ ಹೊಣೆಯನ್ನು ನಿಮ್ಮ ಸಲುವಾಗಿ
ನನಗೆ ಕೊಟ್ಟಿರುತ್ತಾರೆಂಬುದನ್ನು ನೀವೇ ಬಲ್ಲಿರಿ. 3ದೇವರು ತಮ್ಮ ನಿಗೂಢ ಯೋಜನೆಯನ್ನು ನನಗೆ
ಪ್ರಕಟಗೊಳಿಸಿದ್ದಾರೆ. ಇದರ ಬಗ್ಗೆ ನಾನು ಮೊದಲೇ ನಿಮಗೆ ಸಂಕ್ಷೇಪವಾಗಿ ಬರೆದಿದ್ದೇನೆ. 4ಅದನ್ನು
ಲಕ್ಷ್ಯವಿಟ್ಟು ಓದಿದರೆ, ಆಗ ಯೇಸುಕ್ರಿಸ್ತರ ರಹಸ್ಯವನ್ನು ಎಷ್ಟರ ಮಟ್ಟಿಗೆ ನಾನು ಮನಗಂಡಿದ್ದೇನೆ ಎಂದು
ನಿಮಗೇ ತಿಳಿಯುತ್ತದೆ. 5ಹಿಂದಿನ ಕಾಲದವರಿಗೆ ಈ ರಹಸ್ಯವನ್ನು ತಿಳಿಸಿರಲಿಲ್ಲ. ಆದರೆ ಈಗ ದೇವರು
ಪವಿತ್ರಾತ್ಮರ ಮುಖಾಂತರ ಪೂಜ್ಯ ಪ್ರೇಷಿತರಿಗೂ ಪ್ರವಾದಿಗಳಿಗೂ ಅದನ್ನು ಪ್ರಕಟಿಸಿದ್ದಾರೆ. 6ಶುಭಸಂದೇಶದ
ಮೂಲಕ ಅನ್ಯಜನರೂ ಯೇಸುಕ್ರಿಸ್ತರಲ್ಲಿ ದೇವಜನರೊಡನೆ ಸಹಬಾಧ್ಯರು, ಹಕ್ಕುದಾರರು, ಒಂದೇ ಶರೀರದ
ಅಂಗಗಳು, ಹಾಗೂ ದೇವರು ಮಾಡಿದ ವಾಗ್ದಾನದಲ್ಲಿ ಪಾಲುಗಾರರು; ಇದೇ ಆ ರಹಸ್ಯ.

7 ಈ ಶುಭಸಂದೇಶಕ್ಕೆ ದಾಸನನ್ನಾಗಿ ದೇವರು ನನ್ನನ್ನು ನೇಮಿಸಿದ್ದಾರೆ. ತಮ್ಮ ಪ್ರಭಾವಮಯ
ಶಕ್ತಿಯಿಂದ ಈ ವಿಶೇಷ ವರವನ್ನು ಉಚಿತವಾಗಿ ನನಗೆ ದಯಪಾಲಿಸಿದ್ದಾರೆ. 8ದೇವಜನರಲ್ಲೆಲ್ಲ ನಾನು
ಅತ್ಯಲ್ಪನು. ಆದರೂ ಯೇಸುಕ್ರಿಸ್ತರ ಅಪರಿಮಿತ ಆಧ್ಯಾತ್ಮಿಕ ಸಿರಿಸಂಪತ್ತಿನ ಬಗ್ಗೆ ಅನ್ಯಜನರಿಗೆ ಪ್ರಬೋಧಿಸುವ
ಸೌಭಾಗ್ಯ ನನ್ನದಾಯಿತು. 9ಸಮಸ್ತವನ್ನು ಸೃಷ್ಟಿಸಿದ ದೇವರ ಆದಿಯಿಂದಲೂ ಗುಪ್ತವಾಗಿಟ್ಟಿದ್ದ ತಮ್ಮ
ಯೋಜನೆಯನ್ನು ಈಡೇರಿಸುವ ವಿಧಾನವನ್ನು ಸರ್ವಜನರಿಗೆ ತಿಳಿಯಪಡಿಸುವುದಕ್ಕಾಗಿ ನನ್ನನ್ನು
ಆರಿಸಿಕೊಂಡಿರುವರು. 10ಹೀಗೆ ಧರ್ಮಸಭೆಯ ಮೂಲಕ ದೇವರ ಬಹುರೂಪದ ಜ್ಞಾನವು ಅಶರೀರ ಶಕ್ತಿಗಳ
ಅಧಿಕಾರಿಗಳಿಗೂ ಅಧಿಪತಿಗಳಿಗೂ ಈಗಿನ ಕಾಲದಲ್ಲಿ ತಿಳಿಯಬೇಕೆಂಬುದೇ ಅವರ ಉದ್ದೇಶವಾಗಿತ್ತು. 11ತಮ್ಮ
ಪೂರ್ವ ಸಂಕಲ್ಪದಂತೆಯೇ ಇದನ್ನು ದೇವರು ನಮ್ಮ ಪ್ರಭುವಾದ ಯೇಸುಕ್ರಿಸ್ತರಲ್ಲಿ ಕಾರ್ಯಗತಗೊಳಿಸಿದರು.
12ಯೇಸುಕ್ರಿಸ್ತರಲ್ಲಿ ನಾವಿಟ್ಟಿರುವ ವಿಶ್ವಾಸದ ಮೂಲಕ ಅವರಲ್ಲಿ ಒಂದಾಗಿ, ದೇವರ ಸಾನ್ನಿಧ್ಯವನ್ನು ಸೇರುವ
ಧೈರ್ಯ ಹಾಗೂ ಭರವಸೆ ನಮಗಿದೆ. 13ಆದುದರಿಂದ ನಿಮಗಾಗಿ ನಾವು ಸಹಿಸುತ್ತಿರುವ ಸಂಕಟಗಳನ್ನು
ನೆನೆದು ಎದೆಗುಂದದಿರಿ. ಇದೆಲ್ಲವೂ ನಿಮ್ಮ ಯಶಸ್ಸಿಗಾಗಿಯೇ ಎಂಬುದನ್ನು ಮರೆಯದಿರಿ.

## ಪ್ರಭುವಿನ ಅಗಾಧ ಪ್ರೇಮ

14 ಈ ಕಾರಣ ನಾನು ಮೊಣಕಾಲೂರಿ ಪಿತನಲ್ಲಿ ಪ್ರಾರ್ಥಿಸುತ್ತೇನೆ; 15ಸ್ವರ್ಗಲೋಕದಲ್ಲೂ
ಭೂಲೋಕದಲ್ಲೂ ಪ್ರತಿ ಕುಟುಂಬವು ತನ್ನ ಹೆಸರನ್ನು ಪಡೆದಿರುವುದು ಅವರಿಂದಲೇ. 16ಅವರು ತಮ್ಮ
ಮಹಿಮೆಯ ಸಂಪನ್ಮೂಲಗಳಿಂದ ಪವಿತ್ರಾತ್ಮ ಅವರ ಮುಖಾಂತರ ನಿಮ್ಮ ಅಂತರಂಗವನ್ನು ಬಲಗೊಳಿಸಲಿ;
17ನಿಮ್ಮ ವಿಶ್ವಾಸದ ಫಲವಾಗಿ, ಯೇಸುಕ್ರಿಸ್ತರು ನಿಮ್ಮ ಹೃದಯಗಳಲ್ಲಿ ಸದಾ ವಾಸಿಸಲಿ ಮತ್ತು ನಿಮ್ಮ
ಜೀವನವು ಪ್ರೀತಿಯಲ್ಲಿ ಬೇರೂರಿ ಸದೃಢವಾಗಿ ನಿಲ್ಲಲಿ. 18ಹೀಗೆ ದೇವಜನರೆಲ್ಲರೊಡನೆ, ಕ್ರಿಸ್ತ ಯೇಸುವಿನ
ಅಗಾಧ ಪ್ರೀತಿಯ ಉದ್ದ-ಅಗಲ, ಆಳ-ಎತ್ತರ ಎಷ್ಟೆಂಬುದನ್ನು ನೀವು ಗ್ರಹಿಸಿಕೊಳ್ಳುವಂತಾಗಲಿ. 19ಹೌದು,
ಜ್ಞಾನವನ್ನು ಮೀರಿದ ಈ ಪ್ರೀತಿಯನ್ನು ಅರಿತುಕೊಳ್ಳಲು ಆಸಕ್ತರಾಗಬೇಕು, ದೇವರ ಪರಿಪೂರ್ಣತೆಯಿಂದ
ತುಂಬಿದವರಾಗಬೇಕು ಎಂದು ನಾನು ಬೇಡಿಕೊಳ್ಳುತ್ತೇನೆ.

20-21ನಮ್ಮಲ್ಲಿ ಕಾರ್ಯಸಾಧಿಸುವ ಹಾಗೂ ನಮ್ಮ ಆಶೆ-ಆಕಾಂಕ್ಷೆಗಿಂತಲೂ ಬೇಡಿಕೆ-
ಕೋರಿಕೆಗಿಂತಲೂ ಅಧಿಕವಾದುದನ್ನು ಮಾಡಲು ದೇವರು ಶಕ್ತರು. ಅವರಿಗೆ ಧರ್ಮಸಭೆಯಲ್ಲೂ
ಕ್ರಿಸ್ತಯೇಸುವಿನಲ್ಲೂ ಯುಗಯುಗಾಂತರಕ್ಕೂ ತಲತಲಾಂತರಕ್ಕೂ ಮಹಿಮೆ ಸಲ್ಲಲಿ! ಆಮೆನ್!

## ವಿವಿಧ ವರದಾನಗಳು

**4** ಪ್ರಭುವಿನ ಸೇವೆಯ ನಿಮಿತ್ತ ಸೆರೆಯಾಳಾಗಿ ಇರುವ ನಾನು ನಿಮ್ಮಲ್ಲಿ ಬಿನ್ನವಿಸುವುದು ಏನೆಂದರೆ:
ದೇವರ ಕರೆಗೆ ಅನುಗುಣವಾಗಿ ಯೋಗ್ಯ ಬಾಳುವೆ ನಡೆಸಿರಿ. 2ಯಾವಾಗಲೂ ದೀನದಯಾಳತೆ,
ವಿನಯಶೀಲತೆ ಹಾಗೂ ಶಾಂತಿಸಮಾಧಾನವುಳ್ಳವರಾಗಿರಿ. ಪರಸ್ಪರ ಪ್ರೀತಿಯಿಂದಲೂ ಸಹನೆಯಿಂದಲೂ
ವರ್ತಿಸಿರಿ. 3ಪವಿತ್ರಾತ್ಮರಿಂದ ಉಂಟಾಗುವ ಐಕ್ಯತೆಯನ್ನು ಕಾಪಾಡಿಕೊಳ್ಳಲು ಆಸಕ್ತರಾಗಿರಿ. ಅದು ನಿಮ್ಮನ್ನು
ಸಮಾಧಾನದಲ್ಲಿ ಬಂಧಿಸುವುದು. 4ನೀವೆಲ್ಲರೂ ಒಂದೇ ಶರೀರಕ್ಕೆ ಸೇರಿದವರು; ಒಬ್ಬರೇ ಪವಿತ್ರಾತ್ಮರನ್ನು
ಪಡೆದವರು; ಒಂದೇ ನಿರೀಕ್ಷೆಗಾಗಿ ಕರೆಹೊಂದಿದವರು. 5ನಮ್ಮೆಲ್ಲರಿಗೂ ಪ್ರಭು ಒಬ್ಬರೇ; ವಿಶ್ವಾಸವೂ ಒಂದೇ;
ದೀಕ್ಷಾಸ್ನಾನವೂ ಒಂದೇ. 6ದೇವರು ಒಬ್ಬರೇ, ಸರ್ವರ ತಂದೆಯು ಅವರೇ; ಸರ್ವಶ್ರೇಷ್ಠರೂ ಅವರೇ;
ಸರ್ವರ ಮೂಲಕ ಕಾರ್ಯ ನಿರ್ವಹಿಸುವವರೂ ಅವರೇ ಮತ್ತು ಸಮಸ್ತರಲ್ಲಿ ವಾಸಿಸುವವರೂ ಅವರೇ.
7 ಆದರೂ ನಮ್ಮಲ್ಲಿ ಪ್ರತಿಯೊಬ್ಬನೂ ಕ್ರಿಸ್ತಯೇಸು ಅನುಗ್ರಹಿಸುವ ಪ್ರಕಾರವೇ ವರಗಳನ್ನು
ಪಡೆದಿದ್ದಾನೆ. 8ಎಂತಲೇ ಪವಿತ್ರಗ್ರಂಥದಲ್ಲಿ ಹೀಗಿದೆ:

"ಆತನು ಉನ್ನತಿಗೇರಿದನು
ಶತ್ರುಗಳನ್ನು ಸೆರೆಯಾಳಾಗಿ ಕೊಂಡೊಯ್ದನು
ನರಮಾನವರಿಗಿತ್ತನು ವರದಾನಗಳನು."

9'ಏರಿದನು' ಎನ್ನುವುದರ ಅರ್ಥವಾದರೂ ಏನು? ಆತನು ಮೊದಲು ಭೂಗರ್ಭಕ್ಕೂ ಇಳಿದಿದ್ದನು ಎಂಬ
ಅರ್ಥವನ್ನೂ ಒಳಗೊಂಡಿದೆ. 10ಇಳಿದು ಬಂದಿದ್ದಾತನೇ ಲೋಕಗಳಿಗೆಲ್ಲ ಮೇಲೇರಿ ಹೋಗಿದ್ದಾನೆ. ತನ್ನ
ಪ್ರಸನ್ನತೆಯಿಂದ ಇಡೀ ಜಗತ್ತನ್ನೇ ಆವರಿಸಿದ್ದಾನೆ. 11ಈ ವ್ಯಕ್ತಿ ನರಮಾನವರಿಗೆ ವರದಾನಗಳನ್ನಿತ್ತರು.
ಕೆಲವರನ್ನು ಪ್ರೇಷಿತರನ್ನಾಗಿಯೂ ಕೆಲವರನ್ನು ಸಭಾಪಾಲಕರನ್ನಾಗಿಯೂ ಮತ್ತು ಬೋಧಕರನ್ನಾಗಿಯೂ
ನೇಮಿಸಿದರು. 12ದೇವಜನರನ್ನು ಪರಿಣತರನ್ನಾಗಿಸಿ ದೇವರ ಸೇವೆಗೆ ಸಿದ್ಧಗೊಳಿಸಲೆಂದು ಮತ್ತು
ಯೇಸುಕ್ರಿಸ್ತರ ದೇಹವಾದ ಧರ್ಮಸಭೆ ಅಭಿವೃದ್ಧಿ ಹೊಂದಲೆಂದು ಈ ವರಗಳನ್ನು ಅವರಿಗೆ ನೀಡಿದರು.
13ಹೀಗೆ ನಾವೆಲ್ಲರೂ ಒಂದೇ ವಿಶ್ವಾಸದಿಂದಲೂ ದೇವರ ಪುತ್ರನನ್ನು ಕುರಿತ ಜ್ಞಾನದಿಂದಲೂ ಐಕಮತ್ಯವನ್ನು
ಮತ್ತು ಪರಿಪಕ್ವತೆಯನ್ನು ಪಡೆಯುತ್ತೇವೆ. ಜ್ಞಾನಾರ್ಜನೆಯನ್ನು ಪಡೆದವರಾಗಿ, ಕ್ರಿಸ್ತಯೇಸುವಿನ
ಪರಪೂರ್ಣತೆಯ ಮಟ್ಟವನ್ನು ಮುಟ್ಟುತ್ತೇವೆ. 14ಇನ್ನು ಮೇಲೆ ನಾವು ಸಣ್ಣ ಮಕ್ಕಳಂತೆ ದುರ್ಜನರ
ವಂಚನೆಗೂ ದುರ್ಬೋಧಕರ ಕುಯುಕ್ತಿಗೂ ಒಳಪಟ್ಟು ಅತ್ತಿತ್ತ ಅಲೆದಾಡುವುದಿಲ್ಲ. ಗಾಳಿ ಬಂದಂತೆ
ತೂರಾಡುವುದಿಲ್ಲ. 15ಬದಲಾಗಿ, ಪ್ರೀತಿಯಿಂದ ಸತ್ಯವನ್ನೇ ನುಡಿಯುತ್ತೇವೆ. ಶಿರಸ್ಸಾದ ಕ್ರಿಸ್ತಯೇಸುವಿನ
ಅನ್ಯೋನ್ಯತೆಯಲ್ಲಿ ಸರ್ವತೋಮುಖವಾಗಿ ಬೆಳೆಯುತ್ತೇವೆ. 16ಇಡೀ ದೇಹವು ಕ್ರಿಸ್ತಯೇಸುವನ್ನೇ ಆಧರಿಸಿದೆ.
ಅವರಲ್ಲಿಯೇ ಎಲ್ಲ ನರನಾಡಿಗಳು, ಕೀಲು ಗಂಟುಗಳು ಒಂದಾಗಿ ಕೆಲಸಮಾಡುತ್ತವೆ. ಪ್ರತಿಯೊಂದು
ಅಂಗವೂ ತನ್ನ ಕೆಲಸವನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸುವುದರಿಂದ ಇಡೀ ದೇಹ ಬೆಳೆಯುತ್ತಾ,
ಪ್ರೀತಿಯಲ್ಲಿ ಪ್ರವರ್ಧಿಸುತ್ತಾ ಕ್ಷೇಮಾಭಿವೃದ್ಧಿಯನ್ನು ಪಡೆಯುತ್ತದೆ.

## ಹೊಸ ಬಾಳಿನೆಡೆಗೆ

17 ಪ್ರಭುವಿನ ಹೆಸರಿನಲ್ಲಿ ನಾನು ನಿಮಗೆ ಒತ್ತಿಹೇಳುತ್ತೇನೆ: ಇನ್ನು ಮುಂದೆ ನೀವು ಅನ್ಯಜನರಂತೆ
ಜೀವಿಸುವುದನ್ನು ತ್ಯಜಿಸಿರಿ. ಅವರ ಆಲೋಚನೆಗಳು ಹುರುಳಿಲ್ಲದವು. 18ಅವರ ಮನಸ್ಸಿಗೆ ಕತ್ತಲು ಕವಿದಿದೆ.
ಅವರು ಅಜ್ಞಾನಿಗಳೂ ಕಠಿಣ ಹೃದಯಿಗಳೂ ಆಗಿರುವುದರಿಂದ ದೇವರು ಕೊಡುವ ಜೀವಕ್ಕೆ
ಹೊರತಾಗಿದ್ದಾರೆ. 19ಲಜ್ಜೆಗೆಟ್ಟವರಾಗಿ ದುರಿಚ್ಛೆಗಳಿಗೆ ಮಾರುಹೋಗಿದ್ದಾರೆ; ಅಶುದ್ಧ ಕಾರ್ಯಗಳಲ್ಲೇ
ನಿರತರಾಗಿದ್ದಾರೆ. 20ಕ್ರಿಸ್ತಯೇಸುವಿನಿಂದ ನೀವು ಇಂಥದ್ದೇನನ್ನು ಕಲಿಯಲಿಲ್ಲ. 21ಅವರ ವಿಷಯವಾಗಿ ನೀವು
ಕೇಳಿದ್ದು ಮತ್ತು ಕಲಿತದ್ದು ಅವರಲ್ಲಿರುವ ಸತ್ಯಕ್ಕೆ ಅನುಸಾರವಾಗಿತ್ತಲ್ಲವೇ? 22ಆದ್ದರಿಂದ ನೀವು ನಿಮ್ಮ
ಹಿಂದಿನ ನಡತೆಯನ್ನು ಅನುಸರಿಸದೆ ಹಳೆಯ ಸ್ವಭಾವವನ್ನು ಕಿತ್ತೊಗೆಯಿರಿ; ಅದು ಕಾಮಾಭಿಲಾಷೆಯಿಂದ
ಕಲುಷಿತವಾಗಿದೆ. 23ನಿಮ್ಮ ಹೃನ್ಮನಗಳು ನವೀಕೃತವಾಗಲಿ. 24ನೂತನ ಸ್ವಭಾವವನ್ನು ಧರಿಸಿಕೊಳ್ಳಿರಿ. ಇದು

ದೇವರ ಅನುರೂಪದಲ್ಲಿ ನಿರ್ಮಿತವಾದ ಸ್ವಭಾವ; ದೇವರೊಂದಿಗೆ ಸತ್ಸಂಬಂಧವುಳ್ಳ ಹಾಗೂ ನೈಜವಾದ ಪಾವನ ಸ್ವಭಾವ.

25 ಆದುದರಿಂದ, ಸುಳ್ಳಾಡುವುದನ್ನು ಬಿಟ್ಟು ಬಿಡಿ. ಒಬ್ಬರೊಡನೊಬ್ಬರು ಸತ್ಯವನ್ನೇ ನುಡಿಯಿರಿ. ಏಕೆಂದರೆ, ನಾವೆಲ್ಲರೂ ಒಂದೇ ಶರೀರದ ಅಂಗಗಳು. 26ಕೋಪಮಾಡಬೇಕಾಗಿ ಬಂದರೂ ಪಾಪಮಾಡಬೇಡಿರಿ; ಸೂರ್ಯನು ಮುಳುಗುವ ಮುನ್ನ ನಿಮ್ಮ ಕೋಪವು ಇಳಿಯಲಿ. 27ಸೈತಾನನಿಗೆ ಅವಕಾಶ ಕೊಡಬೇಡಿ. 28ಕಳ್ಳತನ ಮಾಡುವವನು ಕಳ್ಳತನವನ್ನು ಬಿಟ್ಟುಬಿಡಲಿ; ಶ್ರಮಪಟ್ಟು ದುಡಿದು ಸಂಪಾದಿಸಲಿ. ಆಗ ತನ್ನ ಪ್ರಾಮಾಣಿಕ ದುಡಿಮೆಯಿಂದ ಕಷ್ಟದಲ್ಲಿರುವವರಿಗೆ ನೆರವು ನೀಡಲು ಸಾಧ್ಯವಾಗುವುದು. 29ನಿಮ್ಮ ಬಾಯಿಂದ ಕೆಟ್ಟಮಾತುಗಳು ಬಾರದಿರಲಿ. ಪ್ರತಿಯಾಗಿ ನಿಮ್ಮ ಮಾತುಗಳು ಆದರ್ಶಕರವಾಗಿರಲಿ; ಸಮಯೋಚಿತವಾಗಿರಲಿ, ಕೇಳುವವರ ಕಿವಿಗದು ಹಿತಕರವಾಗಿರಲಿ. 30ದೇವರ ಪವಿತ್ರಾತ್ಮರನ್ನು ನೋಯಿಸದಿರಿ; ವಿಮೋಚನೆಯ ದಿನದಂದು ನೀವು ದೇವರಿಗೆ ಸೇರಿದವರು ಎಂಬುದನ್ನು ತೋರಿಸಲು ನಿಮ್ಮ ಮೇಲೆ ಒತ್ತಲಾಗಿರುವ ಮುದ್ರೆಯು ಅವರೇ. 31ಎಲ್ಲ ವಿಧವಾದ ದ್ವೇಷ–ದೂಷಣೆ, ಕೋಪ–ಕ್ರೋಧ ಮತ್ತು ಕೆಡುಕುತನವನ್ನು ನಿಮ್ಮಿಂದ ದೂರಮಾಡಿರಿ. 32ಪರಸ್ಪರ ಕರುಣೆಯಿಂದಲೂ ಕನಿಕರದಿಂದಲೂ ವರ್ತಿಸಿರಿ. ಯೇಸುಕ್ರಿಸ್ತರಲ್ಲಿ ದೇವರು ನಿಮ್ಮನ್ನು ಕ್ಷಮಿಸಿದಂತೆಯೇ, ನೀವು ಸಹ ಒಬ್ಬರನ್ನೊಬ್ಬರು ಕ್ಷಮಿಸಿರಿ.

### ಸಚ್ಚರಿತೆಯೇ ಸೌರಭ

**5** ದೇವರ ಅಕ್ಕರೆಯ ಮಕ್ಕಳು ನೀವು. ಆದ್ದರಿಂದ ದೇವರನ್ನೇ ಅನುಸರಿಸಿ ಬಾಳಿರಿ. 2ಕ್ರಿಸ್ತಯೇಸು ನಮ್ಮನ್ನು ಪ್ರೀತಿಸಿ ನಮಗೋಸ್ಕರ ತಮ್ಮನ್ನೇ ಸಮರ್ಪಿಸಿದರು. ದೇವರಿಗೆ ಸುಗಂಧ ಕಾಣಿಕೆಯನ್ನಾಗಿಯೂ ಬಲಿಯನ್ನಾಗಿಯೂ ಅರ್ಪಿಸಿದರು. ಅಂತೆಯೇ, ನೀವೂ ಪ್ರೀತಿಯಿಂದ ಬಾಳಿರಿ.

3 ನೀವು ದೇವಜನರಾಗಿರುವುದರಿಂದ ನಿಮ್ಮಲ್ಲಿ ಲೈಂಗಿಕ ಪಾಪವಾಗಲಿ, ಅಶುದ್ಧ ಕೃತ್ಯಗಳಾಗಲಿ ಮತ್ತು ದುರಾಶೆಯಾಗಲಿ ಇರಬಾರದು. ಇಂಥ ಸುದ್ದಿಗೂ ನೀವು ಅವಕಾಶ ಕೊಡಬಾರದು. 4ಹೊಲಸು ಮಾತುಗಳು, ಬರಡು ನುಡಿಗಳು, ಕುಚೋದ್ಯ ಪದಗಳು ಯಾವುವೂ ನಿಮಗೆ ತರವಲ್ಲ. ಪ್ರತಿಯಾಗಿ, ದೇವರಿಗೆ ನೀವು ಕೃತಜ್ಞತಾ ಸ್ತುತಿಮಾಡಿರಿ. 5ವ್ಯಭಿಚಾರಿಗಳಿಗೂ ಅಶ್ಲೀಲ ಕೃತ್ಯಗಳಲ್ಲಿ ಭಾಗವಹಿಸುವವರಿಗೂ ಮತ್ತು ದುರಾಶೆಯುಳ್ಳವರಿಗೂ (ದುರಾಶೆ ವಿಗ್ರಹಾರಾಧನೆಯ ಒಂದು ರೂಪ) ಕ್ರಿಸ್ತ ಯೇಸುವಿನ ಮತ್ತು ದೇವರ ಸಾಮ್ರಾಜ್ಯದಲ್ಲಿ ಹಕ್ಕುಬಾಧ್ಯತೆ ಇಲ್ಲವೆಂದು ನಿಮಗೆ ಮನದಟ್ಟಾಗಿರಲಿ.

6 ಹುರುಳಿಲ್ಲದ ಮಾತುಗಳನ್ನು ಆಡುವವರಿಗೆ ಮರುಳಾಗದಿರಿ. ಇಂಥ ಕೃತ್ಯಗಳನ್ನು ಮಾಡುವ ದುಷ್ಕರ್ಮಿಗಳ ಮೇಲೆ ದೇವರ ಕೋಪ ಎರಗುತ್ತದೆ. 7ಅಂಥವರ ಸಹವಾಸವೇ ನಿಮಗೆ ಬೇಡ. 8ನೀವು ಹಿಂದೊಮ್ಮೆ ಕತ್ತಲುಮಯವಾಗಿದ್ದಿರಿ; ಈಗಲಾದರೋ ಪ್ರಭುವಿನಲ್ಲಿ ಬೆಳಕಾಗಿದ್ದೀರಿ. ಆದ್ದರಿಂದ ಬೆಳಕಿನ ಮಕ್ಕಳಾಗಿ ಬಾಳಿರಿ. 9ಕಾರಣ – ಸಚ್ಚರಿತೆ, ಸದಾಚಾರ ಮತ್ತು ಸತ್ಯಸಂಧತೆ ಇವೆಲ್ಲವೂ ಬೆಳಕಿನ ಕುಡಿಗಳು. 10ಪ್ರಭುವಿಗೆ ಮೆಚ್ಚಿಕೆಯಾದುದು ಯಾವುದೆಂಬುದನ್ನು ಕಲಿತುಕೊಳ್ಳಿರಿ. 11ನಿಷ್ಪ್ರಯೋಜಕವಾದ ಕತ್ತಲುಮಯ ಕಾರ್ಯಗಳಿಗೆ ಕೈಹಾಕದಿರಿ. ಅಂಥವುಗಳನ್ನು ಬಯಲಿಗೆಳೆದು ಖಂಡಿಸಿರಿ. 12ಆ ಜನರು ಗುಟ್ಟಾಗಿ ಮಾಡುವ ಕೃತ್ಯಗಳು ಹೇಳುವುದಕ್ಕೂ ಅವಮಾನಕರವಾದುವು.

13 ಬೆಳಕು ಬೆಳಗಿಸುವ ವಸ್ತುಗಳೆಲ್ಲವೂ ಕಂಗೊಳಿಸುವುವು. ಹೀಗೆ ಕಂಗೊಳಿಸುವುದೆಲ್ಲವೂ ಬೆಳಕಾಗುವುದು. 14ಆದ್ದರಿಂದ:

"ನಿದ್ರೆಮಾಡುವವನೇ ಎದ್ದೇಳು
ಸತ್ತವರನ್ನು ಬಿಟ್ಟು ಬಾ ಎಚ್ಚೆತ್ತು
ನಿನಗೀವನು ಬೆಳಕನು ಕ್ರಿಸ್ತನು."

ಎಂದು ಬರೆಯಲಾಗಿದೆ. [15]ಆದುದರಿಂದ ನಿಮ್ಮ ನಡತೆಯ ವಿಷಯದಲ್ಲಿ ನೀವು ಅತ್ಯಂತ ಜಾಗರೂಕರಾಗಿರಿ;
ಮೂಢರಂತಿರದೆ ಜಾಣರಾಗಿ ಜೀವಿಸಿರಿ. [16]ಈ ದಿನಗಳು ಕೆಟ್ಟ ದಿನಗಳಾಗಿರುವುದರಿಂದ ನಿಮಗಿರುವ
ಸದವಕಾಶಗಳನ್ನು ಸದ್ವಿನಿಯೋಗಿಸಿಕೊಳ್ಳಿರಿ. [17]ಬುದ್ಧಿಹೀನರಾಗಿರದೆ ಪ್ರಭುವಿನ ಚಿತ್ತವೇನೆಂದು ಗ್ರಹಿಸಿಕೊಳ್ಳಿರಿ.
[18]ಮದ್ಯಪಾನಮಾಡಿ ಮತ್ತರಾಗಬೇಡಿ. ಅದು ಪಾಪಕೃತ್ಯಗಳಿಗೆ ಎಡೆಮಾಡುತ್ತದೆ. ಬದಲಿಗೆ
ಪವಿತ್ರಾತ್ಮಭರಿತರಾಗಿರಿ. [19]ಕೀರ್ತನೆ, ಹಾಡು, ಭಕ್ತಿಗೀತೆ ಇವುಗಳಿಂತ ನಿಮ್ಮ ಭಾವಗಳನ್ನು ಪರಸ್ಪರ
ವ್ಯಕ್ತಪಡಿಸಿರಿ. ಹೃದಯಾಂತರಾಳದಿಂದ ಹಾಡಿ ಪ್ರಭುವಿಗೆ ಸ್ತುತಿಸಲ್ಲಿಸಿರಿ. [20]ನಮ್ಮ ಪ್ರಭು ಯೇಸುಕ್ರಿಸ್ತರ
ಹೆಸರಿನಲ್ಲಿ ಯಾವಾಗಲೂ ಎಲ್ಲ ವರಗಳಿಗಾಗಿಯೂ ಪಿತನಾದ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸಿರಿ.
[21]ಕ್ರಿಸ್ತಯೇಸುವಿನಲ್ಲಿ ಭಯಭಕ್ತಿಯುಳ್ಳವರಾಗಿದ್ದು, ಒಬ್ಬರಿಗೊಬ್ಬರು ನಮ್ರತೆಯಿಂದ ನಡೆದುಕೊಳ್ಳಿರಿ.

## ಸತಿ–ಪತಿಯ ಪ್ರೀತಿ

22 ಮಹಿಳೆಯರೇ, ನೀವು ಪ್ರಭುವಿಗೆ ಹೇಗೋ ಹಾಗೆ ನಿಮ್ಮ ನಿಮ್ಮ ಪತಿಯರಿಗೆ ವಿಧೇಯರಾಗಿರಿ.
[23]ಕ್ರಿಸ್ತಯೇಸು ಧರ್ಮಸಭೆಯೆಂಬ ದೇಹಕ್ಕೆ ಶಿರಸ್ಸಾಗಿರುವ ಹಾಗೆಯೇ, ಪತಿಯಾದವನು ತನ್ನ ಪತ್ನಿಗೆ
ಶಿರಸ್ಸಾಗಿರುತ್ತಾನೆ. ಕ್ರಿಸ್ತಯೇಸುವೇ ಧರ್ಮಸಭೆಯ ಉದ್ಧಾರಕ. [24]ಧರ್ಮಸಭೆ ಕ್ರಿಸ್ತಯೇಸುವಿನ ಆಡಳಿತಕ್ಕೆ
ಒಳಪಟ್ಟಿರುವಂತೆ ಪತ್ನಿಯೂ ಸಹ ಎಲ್ಲಾ ವಿಷಯಗಳಲ್ಲೂ ತನ್ನ ಪತಿಯ ಆಡಳಿತಕ್ಕೆ ಒಳಪಟ್ಟಿರಬೇಕು. [25–
26]ಪುರುಷರೇ, ಕ್ರಿಸ್ತಯೇಸು ಧರ್ಮಸಭೆಯನ್ನು ಪ್ರೀತಿಸಿದ ಪ್ರಕಾರ ನಿಮ್ಮ ನಿಮ್ಮ ಪತ್ನಿಯರನ್ನು ಪ್ರೀತಿಸಿರಿ.
ಧರ್ಮಸಭೆಯನ್ನು ಪಾವನಗೊಳಿಸುವುದಕ್ಕಾಗಿ ಕ್ರಿಸ್ತಯೇಸು ತಮ್ಮ ಪ್ರಾಣವನ್ನೇ ಕೊಟ್ಟರು.
ವಾಕ್ಯೋಪದೇಶದಿಂದಲೂ ಜಲಸ್ನಾನದಿಂದಲೂ ಅದನ್ನು ಶುದ್ಧೀಕರಿಸಿದರು. [27]ಧರ್ಮಸಭೆ
ಕಳಂಕಕಲ್ಮಷವಾಗಲಿ, ಸುಕ್ಕು ಬೊಕ್ಕೆಯಾಗಲಿ ಇಲ್ಲದ ಸೌಂದರ್ಯವತಿಯಾಗಿ ತಮಗೆ ಅರ್ಪಿಸಿಕೊಳ್ಳುವಂತೆ
ಹೀಗೆ ಮಾಡಿದರು. [28]ಹಾಗೆಯೇ ಪುರುಷನು ಸಹ ತನ್ನ ಶರೀರವನ್ನು ಪ್ರೀತಿಸುವಂತೆ ತನ್ನ ಪತ್ನಿಯನ್ನು
ಪ್ರೀತಿಸಲಿ. ತನ್ನ ಪತ್ನಿಯನ್ನು ಪ್ರೀತಿಸುವವನು ತನ್ನನ್ನೇ ಪ್ರೀತಿಸುತ್ತಾನೆ. [29]ಸ್ವಂತ ಶರೀರವನ್ನು ಯಾರೂ
ಎಂದೂ ದ್ವೇಷಿಸುವುದಿಲ್ಲ, ಬದಲಿಗೆ ಅದನ್ನು ಪೋಷಿಸಿ ಪಾಲನೆ ಮಾಡುತ್ತಾನೆ. ಧರ್ಮಸಭೆಯನ್ನು ಸಹ
ಕ್ರಿಸ್ತಯೇಸು ಹೀಗೆಯೇ ಕಾಪಾಡುತ್ತಾರೆ. [30]ನಾವು ಆ ಸಭೆಯ ಅಂಗಗಳು. [31]ಪವಿತ್ರಗ್ರಂಥದಲ್ಲಿ ಹೀಗೆ
ಬರೆಯಲಾಗಿದೆ: "ಈ ಕಾರಣದಿಂದ ಪುರುಷನಾದವನು ತನ್ನ ತಂದೆ ತಾಯನ್ನು ಬಿಟ್ಟು ತನ್ನ ಪತ್ನಿಯೊಡನೆ
ಒಂದುಗೂಡುವನು ಮತ್ತು ಅವರಿಬ್ಬರೂ ಒಂದೇ ಶರೀರವಾಗಿರುವರು." [32]ಈ ಗಹನವಾದ ರಹಸ್ಯವು
ಯೇಸುಕ್ರಿಸ್ತರಿಗೂ ಧರ್ಮಸಭೆಗೂ ಇರುವ ಸಂಬಂಧವನ್ನು ಸೂಚಿಸುತ್ತದೆ ಎಂಬುದೇ ನನ್ನ ಅಭಿಪ್ರಾಯ.
[33]ಆದರೆ ಇದು ನಿಮಗೂ ಅನ್ವಯಿಸುತ್ತದೆ. ಪ್ರತಿಯೊಬ್ಬ ಪುರುಷನು ತನ್ನನ್ನು ಪ್ರೀತಿಸುವಂತೆ ತನ್ನ
ಪತ್ನಿಯನ್ನೂ ಪ್ರೀತಿಸಲಿ ಮತ್ತು ಪ್ರತಿಯೊಬ್ಬ ಸ್ತ್ರೀಯು ತನ್ನ ಪತಿಯ ವಿಷಯದಲ್ಲಿ ಗೌರವದಿಂದ
ನಡೆದುಕೊಳ್ಳಲಿ.

## ಕುಟುಂಬ ಪ್ರೇಮ

**6** ಮಕ್ಕಳೇ, ಪ್ರಭುವಿನಲ್ಲಿ ನಿಮ್ಮ ತಂದೆತಾಯಿಗಳ ಮಾತಿಗೆ ಕಿವಿಗೊಡಿ. ಇದು ಧರ್ಮಸಮ್ಮತವಾದುದು.
[2]'ನಿನ್ನ ತಂದೆತಾಯನ್ನು ಗೌರವಿಸು' ಎಂಬುದು ವಾಗ್ದಾನದಿಂದ ಕೂಡಿದ ಮೊದಲನೆಯ ಆಜ್ಞೆ. [3]ಇದನ್ನು
ಪಾಲಿಸಿದರೆ ನಿನಗೆ ಶುಭವಾಗುವುದು; ನೀನು ಬಹುಕಾಲ ಬಾಳುವೆ.

4 ತಂದೆತಾಯಿಗಳೇ, ನಿಮ್ಮ ಮಕ್ಕಳನ್ನು ಕೆಣಕಿ ಕೆರಳಿಸಬೇಡಿ. ಪ್ರತಿಯಾಗಿ ಪ್ರಭುವಿಗೆ
ಮೆಚ್ಚುಗೆಯಾಗುವ ರೀತಿಯಲ್ಲಿ ಅವರಿಗೆ ಶಿಕ್ಷಣವನ್ನು ಕೊಟ್ಟು ಶಿಸ್ತಿನಿಂದ ಸಾಕಿಸಲಹಿರಿ.

## ದಾಸ್ಯ–ಸ್ವಾತಂತ್ರ್ಯ

5 ಸೇವಕರೇ, ನೀವು ಮಾಡುತ್ತಿರುವುದು ಕ್ರಿಸ್ತಯೇಸುವಿನ ಸೇವೆಯನ್ನೇ ಎಂದು ಭಾವಿಸಿ, ನಿಮ್ಮ
ಲೌಕಿಕ ಧಣಿಗಳಿಗೆ ಭಯಭಕ್ತಿಯಿಂದಲೂ ಏಕಮನಸ್ಸಿನಿಂದಲೂ ವಿಧೇಯರಾಗಿರಿ. [6]ಧಣಿಗಳನ್ನು ಮೆಚ್ಚಿಸುವ

ಸಲುವಾಗಿ ಮುಖದಾಕ್ಷಿಣ್ಯದ ಸೇವೆಯನ್ನು ಮಾಡದಿರಿ. ಕ್ರಿಸ್ತಯೇಸುವಿನ ದಾಸರಂತೆ ದೈವೇಚ್ಛೆಯನ್ನು
ಹೃದಯಪೂರ್ವಕವಾಗಿ ಈಡೇರಿಸಿರಿ. [7]ನೀವು ಮಾಡುವುದು ಜನಸೇವೆಯಲ್ಲ, ಪ್ರಭುಸೇವೆ ಎಂದೇ ಭಾವಿಸಿ
ನಗುಮುಖದಿಂದ ಸೇವೆಮಾಡಿ. [8]ದಾಸ್ಯದಲ್ಲಿರುವವನಾಗಲಿ, ಸ್ವತಂತ್ರವುಳ್ಳವನಾಗಿರಲಿ ಸತ್ಕಾರ್ಯವನ್ನು
ಮಾಡುವವನು ಪ್ರಭುವಿನಿಂದ ತಕ್ಕ ಪ್ರತಿಫಲವನ್ನು ಪಡೆದೇ ತೀರುವನೆಂದು ನೀವು ಬಲ್ಲಿರಿ.
9 ಯಜಮಾನರೇ, ನೀವು ಕೂಡ ನಿಮ್ಮ ಸೇವಕರೊಡನೆ ಯೋಗ್ಯವಾದ ರೀತಿಯಲ್ಲಿ ವರ್ತಿಸಿರಿ.
ಅವರನ್ನು ಬೆದರಿಸುವುದನ್ನು ಬಿಟ್ಟುಬಿಡಿ. ಸ್ವರ್ಗಲೋಕದಲ್ಲಿ ನಿಮಗೂ ಅವರಿಗೂ ಒಬ್ಬ ಯಜಮಾನ
ಇರುತ್ತಾನೆ. ಆತ ಪಕ್ಷಪಾತಿಯಲ್ಲ ಎಂಬುದನ್ನು ಮರೆಯದಿರಿ.

### ದಿಟ್ಟ ಹೋರಾಟ

10 ಕೊನೆಯದಾಗಿ, ಪ್ರಭುವಿನ ಅನ್ಯೋನ್ಯತೆಯಲ್ಲಿ ಬಲಾಢ್ಯರಾಗಿರಿ. ಅವರ ಪರಾಕ್ರಮ ಶಕ್ತಿಯನ್ನು
ಆಶ್ರಯಿಸಿರಿ. [11]ಸೈತಾನನು ನಿಮಗೆ ಒಡ್ಡುವ ಕುತಂತ್ರಗಳ ವಿರುದ್ಧ ಅಚಲರಾಗಿ ನಿಲ್ಲಲು ನೀವು
ಸಮರ್ಥರಾಗುವಂತೆ ದೇವರು ನೀಡುವ ಸಕಲ ಶಸ್ತ್ರಾಸ್ತ್ರಗಳನ್ನು ಧರಿಸಿಕೊಳ್ಳಿರಿ. [12]ನಮ್ಮ ಹೋರಾಟ ಕೇವಲ
ನರಮಾನವರೊಂದಿಗಲ್ಲ, ದಿಗಂತದಲ್ಲಿರುವ ಅಧಿಕಾರಿಗಳ ಹಾಗೂ ಆಧಿಪತ್ಯಗಳ ವಿರುದ್ಧ; ಪ್ರಸ್ತುತ
ಅಂಧಕಾರ ಲೋಕಾಧಿಪತಿಗಳ ಹಾಗೂ ಅಶರೀರ ದುಷ್ಟಗಣಗಳ ವಿರುದ್ಧ. [13]ಎಂದೇ, ದೇವರು ಕೊಡುವ
ಸಕಲ ಶಸ್ತ್ರಾಸ್ತ್ರಗಳೊಂದಿಗೆ ಸುಸಜ್ಜಿತರಾಗಿರಿ. ಆ ದುರ್ದಿನದಂದು ವೈರಿಗಳನ್ನು ಎದುರಿಸಲು ಆಗ ನೀವು
ಶಕ್ತರಾಗುತ್ತೀರಿ. ಮಾತ್ರವಲ್ಲ, ಕಟ್ಟಕಡೆಯವರೆಗೆ ಹಿಮ್ಮೆಟ್ಟದೆ ನಿಲ್ಲುತ್ತೀರಿ; [14]ಹಿಮ್ಮೆಟ್ಟದೆ ನಿಲ್ಲಲೇಬೇಕು. ಇದಕ್ಕಾಗಿ
ಸತ್ಯವೆಂಬ ನಡುಕಟ್ಟನ್ನು ಕಟ್ಟಿಕೊಳ್ಳಿ, ನೀತಿಯೆಂಬ ರಕ್ಷಕವಚವನ್ನು ತೊಟ್ಟುಕೊಳ್ಳಿರಿ. [15]ಶಾಂತಿಯ
ಶುಭಸಂದೇಶವನ್ನು ಸಾರಲು ಶ್ರದ್ಧೆಯೆಂಬ ಪಾದರಕ್ಷೆಯನ್ನು ಮೆಟ್ಟಿಕೊಳ್ಳಿರಿ. [16]ಸತತವೂ ವಿಶ್ವಾಸವೆಂಬ
ಗುರಾಣಿಯನ್ನು ಹಿಡಿದುಕೊಳ್ಳಿರಿ. ಹೀಗೆ ಸೈತಾನನ ಅಗ್ನಿಬಾಣಗಳನ್ನೆಲ್ಲಾ ನಂದಿಸಲು ಶಕ್ತರಾಗುವಿರಿ.
[17]ರಕ್ಷಣೆಯೆಂಬ ಶಿರಸ್ತ್ರಾಣವನ್ನು ಧರಿಸಿಕೊಳ್ಳಿ; ಪವಿತ್ರಾತ್ಮರ ಕೊಡುಗೆಯಾದ ದೇವರ ವಾಕ್ಯವು ನಿಮಗೆ
ಖಡ್ಗವಾಗಿರಲಿ. [18]ಪವಿತ್ರಾತ್ಮರಿಂದ ಪ್ರೇರಿತರಾಗಿ ಎಲ್ಲಾ ಸಮಯಗಳಲ್ಲೂ ಪ್ರಾರ್ಥಿಸಿರಿ. ನಿಮ್ಮ ಕೋರಿಕೆ,
ಬೇಡಿಕೆಗಳನ್ನು ದೇವರಿಗೆ ಅರ್ಪಿಸಿರಿ. ಎಚ್ಚರವಾಗಿದ್ದು ಎಲ್ಲಾ ದೇವಜನರಿಗಾಗಿ ಎಡೆಬಿಡದೆ ಪ್ರಾರ್ಥಿಸಿರಿ.
[19]ಶುಭಸಂದೇಶದ ಸತ್ಯಾರ್ಥವನ್ನು ನಿರ್ಭೀತನಾಗಿ ಸಾರಲು ಸೂಕ್ತವಾದ ಮಾತುಗಳನ್ನು ದೇವರು ನನಗೆ
ದಯಪಾಲಿಸಲೆಂದು ನನಗೋಸ್ಕರ ಪ್ರಾರ್ಥಿಸಿರಿ. [20]ಶುಭಸಂದೇಶದ ನಿಮಿತ್ತ ನಾನು ಸೆರೆಯಾಳಾಗಿದ್ದರೂ
ಪ್ರಭುವಿನ ರಾಯಭಾರಿಯಾಗಿದ್ದೇನೆ. ಎಂತಲೇ, ಈ ಶುಭಸಂದೇಶವನ್ನು ಧೈರ್ಯದಿಂದ ಸೂಕ್ತ ರೀತಿಯಲ್ಲಿ
ಸಾರಲಾಗುವಂತೆ ನನಗಾಗಿ ಪ್ರಾರ್ಥಿಸಿರಿ.

### ಅಂತಿಮ ಆಶೀರ್ವಾದ

21 ಪ್ರಿಯ ಸಹೋದರ ತುಖಿಕನು ನನ್ನ ವಿಷಯವಾಗಿಯೂ ನನ್ನ ಕೆಲಸಕಾರ್ಯಗಳ
ವಿಷಯವಾಗಿಯೂ ನಿಮಗೆ ತಿಳಿಸುವನು. ಆತ ಪ್ರಭುವಿನ ಪ್ರಾಮಾಣಿಕ ಸೇವಕ. [22]ನಮ್ಮ ಸಮಾಚಾರವನ್ನು
ನಿಮಗೆ ತಿಳಿಸಲೆಂದು ಹಾಗೂ ನಿಮ್ಮನ್ನು ಉತ್ತೇಜಿಸಲೆಂದು ಆತನನ್ನು ನಿಮ್ಮಲ್ಲಿಗೆ ಕಳುಹಿಸಿದ್ದೇನೆ.
23 ಪಿತನಾದ ದೇವರೂ ಪ್ರಭುವಾದ ಯೇಸುಕ್ರಿಸ್ತರೂ ಸಹೋದರರಿಗೆ ಶಾಂತಿ ಸಮಾಧಾನವನ್ನು
ಮತ್ತು ಪ್ರೀತಿವಿಶ್ವಾಸವನ್ನು ದಯಪಾಲಿಸಲಿ. [24]ಪ್ರಭು ಯೇಸುಕ್ರಿಸ್ತರಲ್ಲಿ ಚಿರಪ್ರೀತಿಯನ್ನಿಟ್ಟ ಎಲ್ಲರಿಗೂ ದೇವರ
ಅನುಗ್ರಹ ಲಭಿಸಲಿ!